# All India Radio: Bangalore
# National Bulletin In Kannada
# 09.02.2025 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ನಾಳೆ ಪರೀಕ್ಷಾ ಪೇ ಚರ್ಚಾ : ಭವಿಷ್ಯದ ರೂವಾರಿಗಳಲ್ಲಿ ಉತ್ತರದಾಯಿತ್ವ ಪ್ರೇರೇಪಿಸುವ ಸಂವಾದ
2. ಫ್ರಾನ್ಸ್-ಅಮೆರಿಕ ಭೇಟಿಗಾಗಿ ನಾಳೆ ಪ್ರಧಾನಿ ಪ್ರಯಾಣ : ಕೃತಕ ಬುದ್ಧಿಮತ್ತೆ ಕ್ರಿಯಾ ಶೃಂಗಸಭೆಯ ಸಹ ಅಧ್ಯಕ್ಷತೆ
3. ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ಪ್ರಯಾಗ್‌ರಾಜ್‌ಗೆ ಭೇಟಿ : ಮಹಾಕುಂಭಮೇಳ ತೀರ್ಥ ಸ್ನಾನದಲ್ಲಿ ಭಾಗಿ
4. ಏಶಿಯಾದ ಅತಿದೊಡ್ಡ ವೈಮಾನಿಕ ಪ್ರದರ್ಶನ ಏರೋ ಇಂಡಿಯಾ ೨೦೨೫ : ನಾಳೆ ಬೆಂಗಳೂರಿನಲ್ಲಿ ಆರಂಭ : ರಕ್ಷಣಾ ಸಾಮರ್ಥ್ಯದ ಅನಾವರಣದೊಂದಿಗೆ ಸಹಭಾಗಿತ್ವ ಬಲವರ್ಧನೆ - ಸಚಿವ ರಾಜನಾಥ್ ಸಿಂಗ್
5. ಛತ್ತೀಸ್‌ಗಢದಲ್ಲಿ ಭದ್ರತಾ ಪಡೆಯಿಂದ ೩೧ ಮಾವೋವಾದಿಗಳು ಹತ
6. ಕ್ರಿಕೆಟ್ : ೨ನೇ ಏಕದಿನ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಗೆಲ್ಲಲು ಭಾರತಕ್ಕೆ ೩೦೫ ರನ್ ಗುರಿ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ನವದೆಹಲಿಯ ಭಾರತ ಮಂಟಪಂನಲ್ಲಿ ಪರೀಕ್ಷಾ ಪೇ ಚರ್ಚಾ ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ನೇರ ಸಂವಾದ ಕಾರ್ಯಕ್ರಮವನ್ನು ಆಕಾಶವಾಣಿ, ದೂರದರ್ಶನ, ಸ್ವಯಂ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ವಾರ್ತಾ ಮತ್ತು

ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಉನ್ನತ ರಾಜತಾಂತ್ರಿಕ ಪ್ರವಾಸದ ಮೇಲೆ ಫ್ರಾನ್ಸ್ ಹಾಗೂ ಅಮೆರಿಕಕ್ಕೆ ಭೇಟಿ ನೀಡಲಿದ್ದಾರೆ. ಈ ಪ್ರವಾಸದ ಮೊದಲ ಹಂತದಲ್ಲಿ ನಾಳೆಯಿಂದ ಇದೇ ೧೨ರವರೆಗೆ ಫ್ರಾನ್ಸ್‌ನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಳೆ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಕ್ರಿಯಾ ಶೃಂಗಸಭೆ - ೨೦೨೫ರ ಅಧ್ಯಕ್ಷತೆ ವಹಿಸಲಿದ್ದಾರೆ. ನೈತಿಕ ಜವಾಬ್ದಾರಿಯೊಂದಿಗೆ ಆವಿಷ್ಕಾರಗಳ ಹೊಂದಾಣಿಕೆ ಮಾಡುವ ಜಾಗತಿಕ ಕೃತಕ ಬುದ್ಧಿಮತ್ತೆ ನೀತಿಗಳನ್ನು ರೂಪಿಸುವುದು ಈ ಶೃಂಗಸಭೆಯ ಉದ್ದೇಶವಾಗಿದೆ. ೧೦೦ಕ್ಕೂ ಹೆಚ್ಚು ದೇಶಗಳ ಸಂಶೋಧಕರು, ವ್ಯಾಪಾರ ಧುರೀಣರು, ಸಮಾಜದ ಪ್ರತಿನಿಧಿಗಳು ೨ ದಿನಗಳ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಆಡಳಿತದ ಮೇಲೆ ಕೃತಕ ಬುದ್ಧಿಮತ್ತೆ ಪರಿಣಾಮ, ಆರ್ಥಿಕತೆ, ಮೂಲಭೂತಹಕ್ಕು, ಮೊದಲಾದವುಗಳ ಬಗ್ಗೆ ಚರ್ಚೆ ವಿಚಾರ ವಿನಿಮಯ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಫ್ರಾನ್ಸ್‌ನಲ್ಲಿರುವ ಭಾರತದ ರಾಯಭಾರಿ ಸಂಜೀವ್ ಕುಮಾರ್ ಸಿಂಗ್ಲಾ ಮಾತನಾಡಿ, ಕೃತಕ ಬುದ್ಧಿಮತ್ತೆ ಕೆಲವೇ ಜನರ ಅಥವಾ ಕೆಲವೇ ಕಂಪನಿಗಳ ಸ್ವಾಮ್ಯವಾಗಬಾರದು ಎನ್ನುವುದು ಭಾರತದ ಪ್ರಾಥಮಿಕ ಕಾಳಜಿಯಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಸಂಜೀವ್ ಕುಮಾರ್ ಸಿಂಗ್ಲಾ**

ನರೇಂದ್ರ ಮೋದಿಯವರು, ಮಾರ್ಸೆಲ್ಲಿಯಲ್ಲಿ ಭಾರತದ ಹೊಸ ಕಾನ್ಸುಲೇಟ್ ಜನರಲ್ ಕಚೇರಿಯನ್ನು ಉದ್ಘಾಟಿಸಲಿದ್ದಾರೆ. ಫ್ರಾನ್ಸ್ ಹಾಗೂ ಭಾರತದ ನಡುವಿನ ದ್ವಿಪಕ್ಷೀಯ ಸಂಬಂಧಗಳ ಬಗ್ಗೆಯೂ ಅಲ್ಲಿನ ವಿವಿಧ ಗಣ್ಯರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಫ್ರಾನ್ಸ್ ಭೇಟಿ ನಂತರ ಪ್ರಧಾನಿ ನರೇಂದ್ರ ಮೋದಿ, ಬುಧವಾರದಂದು ಎರಡು ದಿನಗಳ ಭೇಟಿಗಾಗಿ ಅಮೆರಿಕ ತೆರಳಲಿದ್ದಾರೆ. ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವ್ಯಾಪಾರ, ಕಾರ್ಯತಂತ್ರ ಸಹಕಾರ ಹಾಗೂ ತಂತ್ರಜ್ಞಾನ ಸಹಭಾಗಿತ್ವದ ಬಗ್ಗೆ ವಿಚಾರ ವಿನಿಮಯ ನಡೆಸಲಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನಾಳೆ ಪ್ರಯಾಗ್‌ರಾಜ್ ಮಹಾಕುಂಭಕ್ಕೆ ಭೇಟಿ ನೀಡಲಿದ್ದಾರೆ. ಗಂಗಾ, ಯಮುನಾ, ಸರಸ್ವತಿ ನದಿಗಳ ತ್ರಿವೇಣಿ ಸಂಗಮದಲ್ಲಿ ಅವರು, ಪವಿತ್ರ

ಸ್ನಾನ ಮಾಡಲಿದ್ದಾರೆ. ರಾಷ್ಟ್ರಪತಿಯವರು ಇದೇ ಸಂದರ್ಭದಲ್ಲಿ ಪ್ರಯಾಗ್‌ರಾಜ್‌ನಲ್ಲಿನ ಅಕ್ಷಯ್‌ವತ್ ಮತ್ತು ಬಡೇ ಹನುಮಾನ್ ಮಂದಿರಗಳಿಗೂ ಭೇಟಿ ನೀಡಲಿದ್ದಾರೆ. ಡಿಜಿಟಲ್ ಮಹಾಕುಂಭ ಎಕ್ಸ್‌ಪಿರಿಯನ್ಸ್ ಕೇಂದ್ರಕ್ಕೆ ಭೇಟಿ ನೀಡಿ, ಆಧುನಿಕ ತಂತ್ರಜ್ಞಾನದ ಮೂಲಕ ಮಹಾಕುಂಭದ ಆಳ-ಅಗಲವನ್ನು ಅನ್ವೇಷಿಸಲಿದ್ದಾರೆ. ಉತ್ತರಾಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು, ಈ ಸಂದರ್ಭದಲ್ಲಿ ಉಪಸ್ಥಿತರಿರಲಿದ್ದಾರೆ.

<><><><>

ಏರೋ ಇಂಡಿಯಾ ದೇಶವನ್ನು ಬಲಿಷ್ಠ, ಸಮರ್ಥ ಹಾಗೂ ಸ್ವಾವಲಂಬಿ ದೇಶವನ್ನಾಗಿಸುವ ಪ್ರಮುಖವಾದ ವೇದಿಕೆಯಾಗಿದೆ ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಏರೋ ಇಂಡಿಯಾ ಭಾರತದ ರಕ್ಷಣಾ ಸಾಮರ್ಥ್ಯದ ಅನಾವರಣದೊಂದಿಗೆ ಸಹಭಾಗಿತ್ವದ ಬಲವರ್ಧಿಸಲಿದೆ ಎಂದರು. ರಕ್ಷಣೆ ಹಾಗೂ ವೈಮಾನಿಕ ಉದ್ದಿಮೆಗಳಲ್ಲಿ ಖಾಸಗಿ ಕ್ಷೇತ್ರವನ್ನು ಸಶಕ್ತಗೊಳಿಸಲು ಸಕ್ರಿಯವಾಗಿ ಕಾರ್ಯ ನಿರ್ವಹಿಸಲಾಗಿದೆ. ಈ ನಿಟ್ಟಿನಲ್ಲಿ ಅತ್ಯುತ್ತಮ ಸಾಧನೆ ಮಾಡಲಾಗಿದೆ. ದೇಶದ ಕ್ಷಿಪಣಿ ಅಭಿವೃದ್ಧಿ ಕಾರ್ಯಕ್ರಮ ಉನ್ನತ ಮಟ್ಟದಲ್ಲಿದೆ. ಕ್ಷಿಪಣಿ ತಂತ್ರಜ್ಞಾನದಲ್ಲಿ ಮಾಡಲಾದ ಯಶಸ್ಸು, ಸಾಧನೆ ಭಾರತವನ್ನು ರಕ್ಷಣಾ ಕ್ಷೇತ್ರದಲ್ಲಿ ಹೆಚ್ಚು ಸ್ವಾವಲಂಬಿಯನ್ನಾಗಿ ಮಾಡಿದ ಎಂದು ಹೇಳಿದರು.

**ಧ್ವನಿ : ರಾಜನಾಥ್ ಸಿಂಗ್ (೨೮ ಸೆಕೆಂಡ್ಸ್)**

ಎಲ್‌ಸಿಎ ತೇಜಸ್, ಎಲ್‌ಸಿಹೆಚ್ ಪ್ರಚಂಡ್ ಮತ್ತು ಸಿ-೨೯೫ ಮೊದಲಾದ ಆಧುನಿಕ ವಿಮಾನಗಳನ್ನು ಭಾರತದಲ್ಲಿಯೇ ತಯಾರಿಸಲಾಗುತ್ತಿದೆ ಎಂದು ಹೇಳಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದರ್ಶಿತ್ವದಲ್ಲಿ ಇಡೀ ರಕ್ಷಣಾ ಕ್ಷೇತ್ರ, ಅದರಲ್ಲೂ ವಿಶೇಷವಾಗಿ ವೈಮಾನಿಕ ಕ್ಷೇತ್ರ ಇದೆಂದೂ ಕಾಣದ ಪ್ರಗತಿಯನ್ನು ಕಂಡಿದೆ ಎಂದು ಅವರು ಹೇಳಿದರು. ದೇಶದ ರಕ್ಷಣಾ ಉತ್ಪನ್ನಗಳ ಪ್ರಮಾಣ ದಾಖಲೆಯ ಒಂದು ಕೋಟಿ ೨೭ ಲಕ್ಷ ರೂಪಾಯಿ ಗಡಿ ದಾಟಿದೆ. ೨೦೨೫-೨೬ರ ವೇಳೆಗೆ ಇದು ಒಂದು ಲಕ್ಷ ೬೦ ಸಾವಿರ ಕೋಟಿ ರೂಪಾಯಿ ದಾಟುವ ನಿರೀಕ್ಷೆಯಿದೆ ಎಂದು ಹೇಳಿದ ಅವರು, ರಕ್ಷಣಾ ಉತ್ಪನ್ನಗಳನ್ನು ಸ್ವಾವಲಂಬಿಯಾಗುವತ್ತ ಪಯಣ ಮುಂದುವರೆದಿದೆ ಎಂದು ರಾಜನಾಥ್ ಸಿಂಗ್ ವಿಶ್ವಾಸ ವ್ಯಕ್ತಪಡಿಸಿದರು. ಏರೋ ಇಂಡಿಯಾ ಪ್ರದರ್ಶನದ ವಿಶೇಷತೆಗಳ ಬಗ್ಗೆ ನಮ್ಮ ಬೆಂಗಳೂರು ಬಾತ್ಮೀದಾರರು ವರದಿ ಮಾಡಿದ್ದಾರೆ.

**ಧ್ವನಿ : ಸುಧೀಂದ್ರ (ಬಾತ್ಮೀದಾರರು) (೪೮ ಸೆಕೆಂಡ್ಸ್)**

<><><><>

ಏಷ್ಯಾದ ಅತಿದೊಡ್ಡ ಏರ್‌ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ನಾಳೆ ಆರಂಭವಾಗಲಿದೆ. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಈ ಪ್ರದರ್ಶನಕ್ಕೆ ಚಾಲನೆ ನೀಡಲಿದ್ದಾರೆ.

<><><><>

ಛತ್ತೀಸ್‌ಗಢದ ಬಿಜಾಪುರ್ ಜಿಲ್ಲೆ ರಾಷ್ಟ್ರೀಯ ಉದ್ಯಾನದ ಅರಣ್ಯದಲ್ಲಿ ಭದ್ರತಾಪಡೆ ಹಾಗೂ ಮಾವೋವಾದಿಗಳ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ೩೧ ಮಾವೋವಾದಿಗಳು ಹತರಾಗಿದ್ದಾರೆ. ಭದ್ರತಾಪಡೆಯ ಇಬ್ಬರು ಸಿಬ್ಬಂದಿ ಹುತಾತ್ಮರಾಗಿದ್ದಾರೆ. ರಾಷ್ಟ್ರೀಯ ಉದ್ಯಾನದ ದಟ್ಟ ಅರಣ್ಯ ಪ್ರದೇಶದಲ್ಲಿ ಮಾವೋವಾದಿಗಳು ಇರುವ ಬಗ್ಗೆ ಸುಳಿವು ದೊರೆತ ಹಿನ್ನೆಲೆಯಲ್ಲಿ ಭದ್ರತಾಪಡೆ ಇಂದು ಬೆಳಗಿನಿಂದ ಕಾರ್ಯಾಚರಣೆ ಆರಂಭಿಸಿತು.

<><><><>

ನಕ್ಸಲ್ ವಿರುದ್ಧದ ಕಾರ್ಯಾಚರಣೆಯಲ್ಲಿ ಸೈನಿಕರು ಹುತಾತ್ಮರಾದ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ತೀವ್ರ ಶೋಕ ವ್ಯಕ್ತಪಡಿಸಿದ್ದು, ಸಂತ್ರಸ್ತ ಕುಟುಂಬಕ್ಕೆ ಸಂತಾಪ ಸೂಚಿಸಿದ್ದಾರೆ. ಹುತಾತ್ಮರ ಸೇವೆಗೆ ದೇಶ ಋಣಿಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಅಮಿತ್ ಶಾ ಹೇಳಿದ್ದಾರೆ.

<><><><>

ಕಟಕ್‌ನ ಬರಾಬತಿ ಕ್ರೀಡಾಂಗಣದಲ್ಲಿ ನಡೆದಿರುವ ೨ನೇ ಏಕದಿನ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಭಾರತಕ್ಕೆ ಗೆಲ್ಲಲು ಇಂಗ್ಲೆಂಡ್ ೩೦೫ ರನ್‌ಗಳ ಗುರಿ ನೀಡಿದೆ. ಇಂಗ್ಲೆಂಡ್ ತಂಡ ೪೯.೫ ಓವರ್‌ಗಳಲ್ಲಿ ಎಲ್ಲ ವಿಕೆಟ್‌ಗಳನ್ನು ಕಳೆದುಕೊಂಡು ೩೦೪ ರನ್‌ಗಳಿಸಿತು. ಇಂಗ್ಲೆಂಡ್ ಪರ ಜೊರೂಟ್ ೬೯, ಬೆನ್ ಡಕ್ಕೇಟ್ ೬೫ ರನ್ ಗಳಿಸಿದರು. ಭಾರತ್ ಅಕ್ಸರ್ ಪಟೇಲ್ ೩೨ ರನ್ ನೀಡಿ ೬ ವಿಕೆಟ್ ಪಡೆದರು. ಗೆಲಲ್ಲು ೩೦೫ ರನ್‌ಗಳ ಗುರಿ ಬೆನ್ನತ್ತಿರುವ ಭಾರತ ಇತ್ತೀಚಿನ ವರದಿ ಬಂದಾಗ ೧೮.೨ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೪೬ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>